**ಕರ್ನಾಟಕ ಸರ್ಕಾರದ ನಡವಳಿ**

**ವಿಷಯ:–** 2016ರ ಪರಿಷ್ಕೃತ **ಯುಜಿಸಿ/ಐಸಿಎಆರ್/ಎಐಸಿಟಿಇ** ವೇತನ ಶ್ರೇಣಿಗಳಲ್ಲಿನ ಬೋಧಕ ಮತ್ತು ತತ್ಸಮಾನ ವೃಂದದ ಸಿಬ್ಬಂದಿಗಳಿಗೆ ತುಟ್ಟಿ ಭತ್ಯೆಯ ದರಗಳನ್ನು ಪರಿಷ್ಕರಿಸುವ ಕುರಿತು.

**ಓದಲಾಗಿದೆ:–** 1. ಸ.ಆ. ಸಂಖ್ಯೆ: ಆಇ 3 ಎಸ್‌ಆರ್‌ಪಿ 2019 ದಿನಾಂಕ: 15.05.2019.
2. ಸ.ಆ. ಸಂಖ್ಯೆ: ಆಇ 16 ಎಸ್‌ಆರ್‌ಪಿ 2019 ದಿನಾಂಕ: 25.10.2019.
3. ಸ.ಆ. ಸಂಖ್ಯೆ: ಆಇ 10 ಎಸ್‌ಆರ್‌ಪಿ 2020 ದಿನಾಂಕ: 05.05.2020.
4. ಭಾರತ ಸರ್ಕಾರದ ದಿನಾಂಕ:20.07.2021ರ ಅಧಿಕೃತ ಜ್ಞಾಪನ ಸಂಖ್ಯೆ: No.1/1/ 2020-E-II(B)

ಪ್ರಸ್ತಾವನೆ:

ಕೋವಿಡ್–19ರ ಸಾಂಕ್ರಾಮಿಕದಿಂದ ಉಂಟಾದ ಸಂಕಷ್ಟಗಳ ಕಾರಣ ಸರ್ಕಾರದ ನೀತಿಯಂತೆ ಮೇಲೆ (3)ರಲ್ಲಿ ಓದಲಾದ ದಿನಾಂಕ: 05.05.2020ರ ಆದೇಶದಲ್ಲಿ ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿನ ನೌಕರರಿಗೆ ದಿನಾಂಕ: 01.01.2020ರಿಂದ ದಿನಾಂಕ: 30.06.2021ರ ಅವಧಿಯವರೆಗೆ ಲಭ್ಯವಿದ್ದ ತುಟ್ಟಿಭತ್ಯೆ ದರಗಳನ್ನು ಸ್ಥಗಿತಗೊಳಿಸಿ ಆದೇಶಗಳನ್ನು ಹೊರಡಿಸಲಾಗಿತ್ತು. ಮೇಲೆ (4)ರಲ್ಲಿ ಓದಲಾದ ಭಾರತ ಸರ್ಕಾರದ ದಿನಾಂಕ: 20.07.2021ರ ಜ್ಞಾಪನದಲ್ಲಿ ಕೇಂದ್ರ ಸರ್ಕಾರದ ನೌಕರರಿಗೆ ದಿನಾಂಕ: 01.01.2020ರಿಂದ ದಿನಾಂಕ: 30.06.2021ರ ಅವಧಿಯ ತುಟ್ಟಿಭತ್ಯೆಯ ದರಗಳನ್ನು ಪರಿಷ್ಕರಿಸಿ ಆದೇಶಗಳನ್ನು ಹೊರಡಿಸಲಾಗಿರುತ್ತದೆ.

ಆದುದರಿಂದ, 2016ರ ಪರಿಷ್ಕೃತ ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ತುಟ್ಟಿಭತ್ಯೆಯನ್ನು ಪರಿಷ್ಕರಿಸುವುದು ಅವಶ್ಯವೆಂದು ಪರಿಗಣಿಸಿರುತ್ತದೆ. ಅದರಂತೆ, ಈ ಕೆಳಕಂಡ ಆದೇಶಗಳನ್ನು ಹೊರಡಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 19 ಎಸ್‌ಆರ್‌ಪಿ 2021**
**ಬೆಂಗಳೂರು, ದಿನಾಂಕ: 29ನೇ ಜುಲೈ 2021**

2016ರ ಪರಿಷ್ಕೃತ ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿನ ನೌಕರರುಗಳಿಗೆ ದಿನಾಂಕ: 01.01.2020ರಿಂದ ದಿನಾಂಕ: 30.06.2021ರ ಅವಧಿಯ ತುಟ್ಟಿಭತ್ಯೆಯ ಹೆಚ್ಚುವರಿ ಕಂತುಗಳನ್ನು ಬಿಡುಗಡೆಗೊಳಿಸಲು ರಾಜ್ಯ ಸರ್ಕಾರವು ಹರ್ಷಿಸುತ್ತದೆ. ಅದರಂತೆ, 2016ರ ಪರಿಷ್ಕೃತ ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿನ ಬೋಧಕ ಮತ್ತು ತತ್ಸಮಾನ ವೃಂದದ ಸಿಬ್ಬಂದಿಗಳ ತುಟ್ಟಿಭತ್ಯೆಯ ದರಗಳನ್ನು ಪ್ರಸ್ತುತ ಮೂಲ ವೇತನದ **ಶೇಕಡ.17 ರಿಂದ ಶೇಕಡ.28ಕ್ಕೆ 1ನೇ ಜುಲೈ 2021**ರಿಂದ ಜಾರಿಗೆ ಬರುವಂತೆ ಪರಿಷ್ಕರಿಸತಕ್ಕದ್ದು.

2. ಈ ಆದೇಶದ ಉದ್ದೇಶಗಳಿಗಾಗಿ 'ಮೂಲ ವೇತನ' ಎಂದರೆ ಸರ್ಕಾರಿ ನೌಕರನು ಧಾರಣೆ ಮಾಡಿರುವ ಹುದ್ದೆಗೆ ಅನ್ವಯವಾಗುವ 2016ರ ಪರಿಷ್ಕೃತ ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿ ಪಡೆಯುವ ವೇತನ.

3. ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಶ್ವವಿದ್ಯಾಲಯಗಳು, ಸರ್ಕಾರಿ/ಅನುದಾನಿತ ಶಿಕ್ಷಣ ಸಂಸ್ಥೆಗಳು, ಸರ್ಕಾರಿ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಪೂರ್ಣಕಾಲಿಕ ನೌಕರರಿಗೆ ಈ ಆದೇಶಗಳು ಅನ್ವಯಿಸುತ್ತವೆ.

4. ಮೂಲ ವೇತನಕ್ಕೆ ಇನ್ನಾವುದೇ ಉಪಲಬ್ದಗಳನ್ನು ಸೇರಿಸತಕ್ಕದ್ದಲ್ಲ.

5. ಈ ಆದೇಶದ ಮೇರೆಗೆ ಮಂಜೂರಾಗಿರುವ ತುಟ್ಟಿ ಭತ್ಯೆಯನ್ನು ಮುಂದಿನ ಆದೇಶದವರೆಗೆ ನಗದಾಗಿ ಪಾವತಿ ಮಾಡುವುದು.

6. ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳ ನಿವೃತ್ತ ನೌಕರರಿಗೆ ಈ ಆದೇಶಗಳು ಅನ್ವಯಿಸುವುದಿಲ್ಲ.

7. ಎನ್‌ಜೆಪಿಸಿ ವೇತನ ಶ್ರೇಣಿಯ ನ್ಯಾಯಾಂಗ ಅಧಿಕಾರಿಗಳು ಮತ್ತು ಪಿಂಚಣಿದಾರರಿಗೆ ಪ್ರತ್ಯೇಕ ಆದೇಶಗಳನ್ನು ಹೊರಡಿಸಲಾಗುವುದು.

8. ತುಟ್ಟಿ ಭತ್ಯೆಯ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

9. ತುಟ್ಟಿ ಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ತೋರಿಸುವುದು ಮತ್ತು ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನ ಎಂದು ಪರಿಗಣಿಸಲಾಗುವುದಿಲ್ಲ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

Uma K
(ಉಮಾ.ಕೆ.)
**ಸರ್ಕಾರದ ಉಪ ಕಾರ್ಯದರ್ಶಿ,**
**ಆರ್ಥಿಕ ಇಲಾಖೆ (ಸೇವೆಗಳು-2).**

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಪ್ರಧಾನ ಮಹಾಲೇಖಪಾಲರು(G&SSA),ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ. ನಂ.5398), ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (E&RSA),ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ. ನಂ.5398) ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು(ಲೆಕ್ಕಗಳು ಮತ್ತು ಹಕ್ಕುಗಳು),ಕರ್ನಾಟಕ, ಪಾರ್ಕ್‌ಹೌಸ್‌ರಸ್ತೆ(ಪಿ.ಬಿ. ನಂ.5329), ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
9. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
10. ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಕುಲಸಚಿವರು (ಆಡಳಿತ).
11. ಆಯುಕ್ತರು / ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ/ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು
12. ಖಜಾನೆಅಧಿಕಾರಿ, ರಾಜ್ಯ ಹುಜೂರುಖಜಾನೆ/ಜಿಲ್ಲಾ ಖಜಾನೆಗಳು.
13. ನಿರ್ದೇಶಕರು, ಕರ್ನಾಟಕರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
14. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'ಎ',ಬಹುಮಹಡಿಗಳ ಕಟ್ಟಡ, ಬೆಂಗಳೂರು.
15. ಕರ್ನಾಟಕ ಸರ್ಕಾರ ಸಚಿವಾಲಯದಗ್ರಂಥಾಲಯ/ವಿಧಾನ ಮಂಡಲದಗ್ರಂಥಾಲಯ.
16. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ www.finance.kar.nic.in ವೀಕ್ಷಿಸಿ.**